# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 21.01.2011**

ದಿನಾಂಕ: 23.01.2011 ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪೂರ್ವಭಾವಿಯಾಗಿ ದಿನಾಂಕ: 21.01.2011 ರಂದು ಬೆಳಿಗ್ಗೆ 8.30 ಗಂಟೆಗೆ ಪಲ್ಸ್ ಪೋಲಿಯೋ ಕಾರ್ಯಕ್ರಮದ ಪ್ರಯುಕ್ತ ಸಾರ್ವಜನಿಕರಲ್ಲಿ ಕಾರ್ಯಕ್ರಮದ ಬಗ್ಗೆ ಅರಿವು ಮೂಡಿಸಲು ಜಾಥಾ ಕಾರ್ಯಕ್ರಮವನ್ನು ಮಹಾತ್ಮಾಗಾಂಧಿ ಪ್ರತಿಮೆಯಿಂದ ಪ್ರಾರಂಭಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಡಾ|| ರಾಜ್‌ಕುಮಾರ್ ಗಾಜಿನಮನೆ ಆವರಣದಲ್ಲಿ ಅಂತ್ಯಗೊಳಿಸಲಾಯಿತು.

ಸದರಿ ಕಾರ್ಯಕ್ರಮವನ್ನು ಪೂಜ್ಯ ಮಹಾಪೌರರಾದ ಶ್ರೀ ಎಸ್.ಕೆ.ನಟರಾಜ್ ರವರು ಉದ್ಘಾಟನೆಗೊಳಿಸಿದರು. ಸ್ಥಾಯಿ ಸಮಿತಿ ಅಧ್ಯಕ್ಷರು, ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ವೃಂದದ ಅಧಿಕಾರಿಗಳು ಪಾಲ್ಗೊಂಡಿದ್ದು, ರೋಟರಿ ಸಂಸ್ಥೆಯವರು ಈ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಖಾಸಗಿ ನರ್ಸಿಂಗ್ ಕಾಲೇಜ್‌ರವರು ಮತ್ತು ಎನ್.ಸಿ.ಸಿ. ವಿದ್ಯಾರ್ಥಿಗಳು ಪಾಲ್ಗೊಂಡು ಜನರಿಗೆ ಅರಿವು ನೀಡುವಲ್ಲಿ ಸಹಾಯ ಮಾಡಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸುಮಾರು ಒಟ್ಟು 1697 ಪೋಲಿಯೋ ಬೂತ್, 543 ಸಂಚಾರಿ ಪೋಲಿಯೋ ಬೂತ್ ಸ್ಥಾಪಿಸಲಾಗಿ, 7874 ಜನರು ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದು, 400 ಜನ ಸೂಪರ್‌ವೈಸಿಂಗ್ ಕೆಲಸ ನಿರ್ವಹಿಸಲಿದ್ದು, ಸುಮಾರು 651057 ಜನ 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಹಾಗೂ ಸಾರ್ವಜನಿಕರಲ್ಲಿ ಮನವಿ ಮಾಡುವುದೇನೆಂದರೆ ಮುಖ್ಯವಾಗಿ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುವ ನಾಗರಿಕರು, ಕೊಳಚೆ ಪ್ರದೇಶದ ನಿವಾಸಿಗಳು ಹತ್ತಿರದ ಪೋಲಿಯೋ ಬೂತ್‌ಗಳಿಗೆ ಹೋಗಿ ಎಲ್ಲಾ 5 ವರ್ಷದೊಳಗಿನ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಬೇಕೆಂದು ಪೂಜ್ಯ ಮಹಾಪೌರರು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಎಲ್ಲಾ ಮಾರುಕಟ್ಟೆ ಪ್ರದೇಶ, ರೈಲ್ವೆ ನಿಲ್ದಾಣಗಳಲ್ಲಿ, ಬಸ್ ನಿಲ್ದಾಣಗಳಲ್ಲಿ, ವಾಣಿಜ್ಯ ಸಂಕೀರ್ಣಗಳಲ್ಲಿ ಪೋಲಿಯೋ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಲಾಗುವುದು.

ಪಾಲಿಕೆಯಿಂದ ಎಲ್ಲಾ ಪೂರ್ವಭಾವಿ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ನಗರದಾದ್ಯಂತ ಲಸಿಕಾ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಪೋಲಿಯೋ ಕಾಯಿಲೆಯನ್ನು ಸಂಪೂರ್ಣವಾಗಿ ತೊಡೆದು ಹಾಕಲು ಸಾರ್ವಜನಿಕರು ಪಾಲಿಕೆಯೊಂದಿಗೆ ಸಹಕರಿಸಿ, 5 ವರ್ಷ ಒಳಗಿನ ಎಲ್ಲಾ ಮಕ್ಕಳಿಗೆ ಲಸಿಕೆ ಹಾಕಿಸುವಂತೆ ಪಾಲಿಕೆ ಆಯುಕ್ತರಾದ ಶ್ರೀ ಸಿದ್ದಯ್ಯ ರವರು ನಾಗರಿಕರಲ್ಲಿ ಮನವಿ ಮಾಡಿದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**